**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 725 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:30.01.2017

# ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿಗಳಲ್ಲಿ ಪ್ಲಾಸ್ಟಿಕ್ ನಿಷೇಧ ಅನುಷ್ಠಾನ ಕುರಿತು.

**ಉಲ್ಲೇಖ:**
1) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಜೀವಿಶಾಸ್ತ್ರ ಇಲಾಖೆಯ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ಬೆಂಗಳೂರು, ದಿನಾಂಕ 11.03.2016
2) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಜೀವಿಶಾಸ್ತ್ರ ಇಲಾಖೆಯ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012(ಭಾಗ-3), ಬೆಂಗಳೂರು, ದಿನಾಂಕ 03.11.2016
3) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಜೀವಿಶಾಸ್ತ್ರ ಇಲಾಖೆಯ ಸುತ್ತೋಲೆ ಸಂಖ್ಯೆ: ಅಪಜೀ 36 ಇಎನ್‌ಜಿ 2016, ದಿನಾಂಕ 15.06.2016
4) ಸರ್ಕಾರದ ಸಮಸಂಖ್ಯೆಯ ಪತ್ರ, ದಿನಾಂಕ 16.08.2016

***

ಭಾರತ ಸಂವಿಧಾನದದ ಕಲಂ 48ಎ ಅನ್ವಯ, ಪ್ರತಿ ರಾಜ್ಯ ಸರ್ಕಾರವೂ ಪರಿಸರದ ಮಟ್ಟವನ್ನು ಉತ್ತಮಪಡಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ. ಈ ನಿಟ್ಟಿನಲ್ಲಿ ದೈನಂದಿನ ಬಳಕೆಯಲ್ಲಿರುವ ಪ್ಲಾಸ್ಟಿಕ್ ವಸ್ತುಗಳು, ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳು, ಪ್ಲಾಸ್ಟಿಕ್ ಭಿತ್ತಿಪತ್ರಗಳು, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚಗಳು, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತು ಥರ್ಮೋಕೋಲ್‌ನಿಂದ ತಯಾರಾದ ವಸ್ತುಗಳ ವ್ಯಾಪಕ ಬಳಕೆಯಿಂದಾಗಿ ಪರಿಸರಕ್ಕೆ ಹಾನಿ ಮತ್ತು ಮಾನವ ಮತ್ತಿತರ ಪ್ರಾಣಿಗಳ ಆರೋಗ್ಯಕ್ಕೆ ಅಪಾಯ ಉಂಟಾಗುತ್ತಿರುವುದರ ಜೊತೆಗೆ, ಚರಂಡಿಗಳು ಮೋರಿಗಳ ಮತ್ತು ಒಳಚರಂಡಿಗಳ ಸರಾಗ ಹರಿವಿಗೆ ತಡೆಯನ್ನು ಉಂಟುಮಾಡಿ ಗ್ರಾಮೀಣ ಪ್ರದೇಶಗಳ ನೀರಿನ ಮೂಲಗಳು ಹಾಗೂ ಜಲಕಾಯಗಳನ್ನು ಮಾಲಿನ್ಯಗೊಳಿಸುತ್ತಿವೆ. ಇದನ್ನು ಮನಗಂಡು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಜೀವಿಶಾಸ್ತ್ರ ಇಲಾಖೆಯು ಉಲ್ಲೇಖ (1) ರ ಅಧಿಸೂಚನೆಯಲ್ಲಿ ಮೇಲ್ಕಂಡ ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧಿಸಿ ಕೆಳಕಂಡಂತೆ ನಿರ್ದೇಶನ ನೀಡಿದೆ.

"ಯಾವುದೇ ವ್ಯಕ್ತಿ, ಅಂಗಡಿ ಮಾಲೀಕ, ಮಾರಾಟಗಾರ, ಸಗಟು ಮಾರಾಟಗಾರ ಅಥವಾ ಚಿಲ್ಲರೆ ವ್ಯಾಪಾರಿ, ವ್ಯಾಪಾರಿ ಮತ್ತು ಮಾರಾಟಗಾರರು, ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ಬಳಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿದೆ. ಮುಂದುವರೆದು, ಯಾವುದೇ ಕೈಗಾರಿಕೆ ಅಥವಾ ವ್ಯಕ್ತಿ ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ರಾಜ್ಯಾದ್ಯಂತ ನಿಷೇಧಿಸಿದೆ."

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ನಿಷೇಧವನ್ನು ಅನುಷ್ಠಾನ ಗೊಳಿಸಲು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಉಪಕಾರ್ಯದರ್ಶಿಗಳು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಅನುಷ್ಠಾನಾಧಿಕಾರಿಗಳನ್ನಾಗಿ ಉಲ್ಲೇಖ (2) ರಲ್ಲಿ ಆದೇಶಿಸಲಾಗಿದೆ.

ಪ್ಲಾಸ್ಟಿಕ್ ನಿಷೇಧ ಉಲ್ಲಂಘಿಸುವವರ ಮೇಲೆ ಕ್ರಮವಹಿಸುವ ಅಧಿಕಾರವನ್ನು ಹೊಂದಿರುವ ಅಧಿಕಾರಿಗಳ ವಿವರಗಳು ಹಾಗೂ ಯಾವ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸುವುದು ಎಂಬ ಬಗ್ಗೆ ಉಲ್ಲೇಖ (3) ರಲ್ಲಿ ನೀಡಿರುವ ನಿರ್ದೇಶನಗಳ ಕುರಿತು ದಿನಾಂಕ 16.08.2016 ರ ಸರ್ಕಾರದ ಪತ್ರದಲ್ಲಿ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ತಿಳಿಸಲಾಗಿದೆ.

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಬಗ್ಗೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಿ, ಪ್ಲಾಸ್ಟಿಕ್ ನಿಷೇಧವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಕರ್ನಾಟಕ ರಾಜ್ಯವನ್ನು ಪ್ಲಾಸ್ಟಿಕ್ ಮುಕ್ತ ರಾಜ್ಯವನ್ನಾಗಿ ಮಾಡಲು ಅಗತ್ಯ ಕ್ರಮವಹಿಸಬೇಕೆಂದು ತಿಳಿಸಿದೆ.

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
5) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ(ಪರಿಸರ ಮತ್ತು ಜೀವಿಶಾಸ್ತ್ರ), ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಜೀವಿಶಾಸ್ತ್ರ ಇಲಾಖೆ, 7 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.